(ಅ) ಹಾಗಿದ್ದಲ್ಲಿ ಹಕ್ಕು ಪತ್ರ ನೀಡಲು ಸರ್ಕಾರದವರು ಕೈಗೊಂಡಿರುವ ಕ್ರಮವೇನು ?

(ಇ) ೧೯೮೨ರ ನಂತರ ಅರ್ಜಿ ಸಲ್ಲಿಸಿದವರಿಗೆ ಹಕ್ಕು ನೀಡಲಾಗುವುದಿಲ್ಲವೆಂದು ತೀರ್ಮಾನ ತೆಗೆದುಕೊಳ್ಳಲಾಗಿದೆಯೇ, ಹಾಗಿದ್ದಲ್ಲಿ ಅದಕ್ಕೆ ಕಾರಣವೇನು ?

(ಈ) ಕೃಷಿ ಕೂಲಿಕಾರರು ಮತ್ತು ಸಣ್ಣ ರೈತರು ಅಜ್ಞಾನದಿಂದ ಮಂಜೂರಾತಿ ಕೋರಿ ಅರ್ಜಿ ಸಲ್ಲಿಸದಿದ್ದಲ್ಲಿ ಅವರಿಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗುವುದೆ ?

ಶ್ರೀ ಎಸ್. ಆರ್. ಬೊಮ್ಮಾಯಿ (ಕಂದಾಯ ಹಾಗೂ ಯೋಜನಾ ಮಂತ್ರಿಗಳು).—

(ಅ) ಸರ್ಕಾರಿ ಭೂಮಿಯಿನ್ನು ಒತ್ತುವರಿ ಮತ್ತು ಬಗರ್ ಹುಕುಂ ಸಾಗುವಳಿ ಮಾಡುತ್ತಿರುವ ಪ್ರಕರಣಗಳಲ್ಲಿ ಅನಿಶ್ಚಿತತೆಯನ್ನು ಹೋಗಲಾಡಿಸಲು ಕರ್ನಾಟಕ ಭೂ ಕಂದಾಯ ಅಧಿನಿಯಮ ೧೯೬೪ಕ್ಕೆ ಸೂಕ್ತ ತಿದ್ದುಪಡಿಯನ್ನು ತಂದು ಈ ಒತ್ತುವರಿ ಮತ್ತು ಬಗರ್ ಹುಕುಂ ಸಾಗುವಳಿಯನ್ನು ಮಾಡುತ್ತಿರುವವರಿಗೆ ಸಕ್ರಮಗೊಳಿಸಲು ಸರ್ಕಾರವು ನಿರ್ಧಾರ ಕೈಗೊಂಡಿರುತ್ತದೆ.

(ಆ) ಇಂತಹ ಬಗರ್ ಹುಕುಂ ಒತ್ತುವರಿ ಮತ್ತು ಬಗರ್ ಹುಕುಂ ಸ್ವಾಧೀನ ಹೊಂದಿದ ಸರ್ಕಾರಿ ಜಮೀನನ್ನು ಸಕ್ರಮಗೊಳಿಸಲು ರೂಪರೇಷೆಗಳನ್ನು ರಚಿಸುವ ಬಗ್ಗೆ ಕ್ರಮ ತೆಗೆದು ಕೊಳ್ಳಲಾಗಿದೆ.

(ಇ) ಉಪ ಪ್ರಶ್ನೆ (ಅ) ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

(ಈ) ಉಪ ಪ್ರಶ್ನೆ (ಅ) ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಖಾನಾಪುರ ಅರ್ಬನ್ ಕೋ-ಆಪರೇಟಿವ್ ಬ್ಯಾಂಕ್ ನಿ.

ಖಾನಾಪುರ ಇದರ ಆಡಳಿತ ಮಂಡಳಿಯ ರದ್ದತಿ ಕೋರಿ ಬಂದ ಮನವಿ ಬಗ್ಗೆ

೯೪೮. ಶ್ರೀ ವಿ. ಪಿ. ಪಾಟೀಲ್ (ಖಾನಾಪುರ).— ಮಾನ್ಯ ಸಹಕಾರ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ,

(ಅ) ಸಹಕಾರ ಸಂಘಗಳ ಸಂಯುಕ್ತ ನಿಬಂಧಕರು ಹಾಗೂ ಸರ್ಕಾರಕ್ಕೆ ಖಾನಾಪುರ ಅರ್ಬನ್ ಕೋ-ಆಪರೇಟಿವ್ ಬ್ಯಾಂಕ್ ನಿ. ಖಾನಾಪುರ ಇದರ ಆಡಳಿತ ಮಂಡಳಿಯನ್ನು ರದ್ದುಪಡಿಸುವಂತೆ ಯಾವುದಾದರೂ ಮನವಿ ಬಂದಿದೆಯೇ ?

(ಆ) ಹಾಗಿದ್ದಲ್ಲಿ ಈ ಬಗ್ಗೆ ವಿವರಗಳು ಹಾಗೂ ಕೈಗೊಂಡ ಕ್ರಮ

ಶ್ರೀ ಆರ್. ಎಲ್. ಜಾಲಪ್ಪ (ಸಹಕಾರ ಮಂತ್ರಿಗಳು).—

(ಅ) ಹೌದು

(ಆ) ವಸತಿ ಗೃಹ ನಿರ್ಮಾಣ ಮಾಡುವಲ್ಲಿ, ಸಿಬ್ಬಂದಿ ನೇಮಕಾತಿಯಲ್ಲಿ ಹಾಗೂ ಸಾಲ ಮಂಜೂರಾತಿ ಮಾಡುವಲ್ಲಿ ಕಾರ್ಯಕಾರಿ ಸಮಿತಿಯು ವಿರುದ್ಧ ಕಾನೂನು ಉಲ್ಲಂಘನೆ ಹಾಗೂ ಹಲವಾರು ಅಕ್ರಮ ವ್ಯವಹಾರಗಳ ಬಗ್ಗೆ ಆರೋಪ ಹೊರಿಸಲಾಗಿದೆ. ಬೆಳಗಾಂ ಜಿಲ್ಲೆಯ ಸಹಕಾರ ಸಂಘಗಳ ಉಪ ನಿಬಂಧಕರನ್ನು ಆರೋಪಗಳ ಬಗ್ಗೆ ತೀರ್ವ ತನಿಖೆಯನ್ನು ನಡೆಸಿ ಕೂಲಂಕಷ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲು ಆದೇಶಿಸಲಾಗಿದೆ. ಅವರಿಂದ ಸಮಗ್ರ ವರದಿ ಪಡೆದುಕೊಂಡು ಸೂಕ್ತ ಕ್ರಮವನ್ನು ತ್ವರಿತವಾಗಿ ಕೈಗೊಳ್ಳಲಾಗುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಸ್. ಆರ್. ಬೊಮ್ಮಾಯಿ.—ಮಾನ್ಯ ಅಧ್ಯಕ್ಷರೇ, ಲಿಖಿತ ಮೂಲಕ ಉತ್ತರಿಸಿದ ಪ್ರಶ್ನೋತ್ತರಗಳನ್ನು ಸಭೆಯ ಮುಂದೆ ಇಡುತ್ತೇನೆ.

ಅಧ್ಯಕ್ಷರು.—ಸಭೆಯ ಮುಂದೆ ಮಂಡಿಸಲಾಯಿತು.